ಲೆಕ್ಕಾಚಾರದ ಆಧಾರದ ಮೇಲೆ ನಗದೀಕರಣವನ್ನು ಮಂಜೂರು ಮಾಡಲು ಸಕ್ಷಮ ರಜೆ ಮಂಜೂರಾತಿ ಪ್ರಾಧಿಕಾರಿಗಳು ಕ್ರಮವಹಿಸತಕ್ಕದ್ದು ಮತ್ತು ಮಹಾಲೇಖಪಾಲರು ಲೆಕ್ಕಾಚಾರದ ಬಗ್ಗೆ ಯಾವುದೇ ವ್ಯತ್ಯಾಸವನ್ನು ತಿಳಿಸಿದಲ್ಲಿ ಅದನ್ನು ಸರಿಪಡಿಸುವ ಮತ್ತು ಅದರನ್ವಯದ ಆರ್ಥಿಕ ಸೌಲಭ್ಯಗಳಿಗೆ ಮಾತ್ರ ಅರ್ಹ ಎಂಬ ಷರತ್ತಿಗೊಳಪಡಿಸಿ ಮಂಜೂರು ಮಾಡತಕ್ಕದ್ದು.

ಮುಂದುವರೆದು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 118 ರಲ್ಲಿ ನಿಗದಿಪಡಿಸಿರುವ ಗಳಿಕೆ ರಜೆ ನಗದೀಕರಣ ನಿಯಂತ್ರಣಕ್ಕೆ ಸಂಬಂಧಿಸಿದ ಇತರೆ ಷರತ್ತುಗಳು ಅನ್ವಯವಾಗುತ್ತವೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

Signed by Ajay Korade
Date: 17-01-2025 16:11:05
Reason: Approved

(ಅಜಯ್ ಎಸ್. ಕೊರಡೆ)
ಸರ್ಕಾರದ ಅಧೀನ ಕಾರ್ಯದರ್ಶಿ
ಆರ್ಥಿಕ ಇಲಾಖೆ (ಸೇವೆಗಳು-1)
ದೂ:080-22033135

---

ಹಣಕಾಸು ನಿಯಂತ್ರಣಾಧಿಕಾರಿಗಳ ಕಛೇರಿ
ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಸಂಖ್ಯೆ ಹನಿಅ/ವಿಭಾಗ-2/ರಜೆ ಅಧ್ಯರ್ಪಣೆ/2024-25

ದಿನಾಂಕ 17-01-2025

:::: ಸುತ್ತೋಲೆ - ೧೪ ::::

**ವಿಷಯ:-** 2025ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಸೌಲಭ್ಯವನ್ನು ಕೃವಿವಿ ಸಿಬ್ಬಂದಿ ವರ್ಗದವರಿಗೆ ವಿಸ್ತರಿಸುವ ಬಗ್ಗೆ.

**ಉಲ್ಲೇಖ:-** 1) ಸರ್ಕಾರಿ ಆದೇಶ ಸಂಖ್ಯೆ: ಆಇ 03 ಸೇನಿಸೇ 2024 ಬೆಂಗಳೂರು, ದಿನಾಂಕ: 17.01.2025
2) ಮಾನ್ಯ ಕುಲಪತಿಗಳ ಅನುಮೋದನೆ ದಿನಾಂಕ: 17-01-2025.

ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ಸರ್ಕಾರವು 2025 ನೇ ಸಾಲಿನ ಬ್ಲಾಕ್ ಅವಧಿಯಲ್ಲಿ ರಾಜ್ಯ ಸರ್ಕಾರಿ ನೌಕರರು ಗರಿಷ್ಠ 15 ದಿನಗಳಿಗೆ ಮೀರದ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯ ಪಡೆಯಲು ಎಲ್ಲಾ ವೃಂದದ ಅರ್ಹ ಅಧಿಕಾರಿ/ನೌಕರರು ಒಂದು ತಿಂಗಳ ಮುಂಚಿತ ಮನವಿ ನೀಡಿ ಜನವರಿ 2025 ರಿಂದ ಡಿಸಂಬರ್ 2025 ರವರೆಗಿನ ಅವರ ಇಚ್ಛೆಯಂತೆ ಯಾವುದೇ ತಿಂಗಳಿನಲ್ಲಿ ಗಳಿಕೆ ರಜೆ ನಗದೀಕರಣದ ಪ್ರಯೋಜನ ಪಡೆಯಲು ಅರ್ಹರಾಗಿರುತ್ತಾರೆ ಎಂದು ಆದೇಶಿಸಿದೆ.

ಅದರಂತೆ, ಸರ್ಕಾರಿ ಆದೇಶ ಸಂಖ್ಯೆ ಆಇ 03 ಸೇನಿಸೇ 2024 ಬೆಂಗಳೂರು, ದಿನಾಂಕ: 17.01.2025 ರ ಆದೇಶವನ್ನು ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ವರ್ಗದ ಅಧಿಕಾರಿಗಳು/ಸಿಬ್ಬಂದಿಗಳಿಗೂ ಯಥಾವತ್ತಾಗಿ ಅಳವಡಿಸಲಾಗಿದೆ.

ಹಣಕಾಸು ನಿಯಂತ್ರಣಾಧಿಕಾರಿಗಳು

ಪ್ರತಿ:

1. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಅಧಿಕಾರಿಗಳಿಗೆ.
2. ಕೃಷಿ ವಿಶ್ವವಿದ್ಯಾನಿಲಯದ ಎಲ್ಲಾ ಬಟವಾಡೆ ಅಧಿಕಾರಿಗಳಿಗೆ
3. ಉಪ ಹಣಕಾಸು ನಿಯಂತ್ರಣಾಧಿಕಾರಿಗಳು / ಸಹಾಯಕ ಹಣಕಾಸು ನಿಯಂತ್ರಣಾಧಿಕಾರಿಗಳು, ಹಣಕಾಸು ನಿಯಂತ್ರಣಾಧಿಕಾರಿಗಳ ಕಛೇರಿ, ಜಿಕೆವಿಕೆ. ಬೆಂಗಳೂರು.

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2025 ನೇ ಸಾಲಿನ ಅವಧಿಗೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ನಗದೀಕರಣ ಪಡೆಯುವ ಸೌಲಭ್ಯವನ್ನು ನಿಯತಗೊಳಿಸುವ ಬಗ್ಗೆ.

ಓದಲಾಗಿದೆ: ಸರ್ಕಾರಿ ಆದೇಶ ಸಂಖ್ಯೆ: ಆಇ 10 (ಇ) ಸೇನಿಸೇ 2023, ದಿನಾಂಕ:21.12.2023.

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ: 21.12.2023 ರ ಸರ್ಕಾರಿ ಆದೇಶದಲ್ಲಿ 2024 ನೇ ಸಾಲಿನ ಬ್ಲಾಕ್ ಅವಧಿಗೆ ಸರ್ಕಾರಿ ಅಧಿಕಾರಿ/ನೌಕರರು ಹಾಗೂ ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿತ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗತಿಗಳಿಗೊಳಪಟ್ಟು ಗಳಿಕೆ ರಜೆ ಅಧ್ಯರ್ಪಿಸಿ ನಗದೀಕರಣ ಪಡೆಯಲು ಕರ್ನಾಟಕ ನಾಗರಿಕ ಸೇವಾ ನಿಯಮಾವಳಿಯ ನಿಯಮ 118(2)(i) ರನ್ವಯ ಅವಕಾಶ ಕಲ್ಪಿಸಲಾಗಿತ್ತು. ಸದರಿ ಬ್ಲಾಕ್ ಅವಧಿಯು ದಿನಾಂಕ:31/12/2024 ರಂದು ಮುಕ್ತಾಯಗೊಳ್ಳುವ ಹಿನ್ನೆಲೆಯಲ್ಲಿ ಸರ್ಕಾರವು 2025 ನೇ ಸಾಲಿನ ಬ್ಲಾಕ್ ಅವಧಿಯಲ್ಲಿ 15 ದಿನ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜೆ ವೇತನಕ್ಕೆ ಸಮಾನವಾಗಿ ನಗದೀಕರಣ ಪಡೆಯುವ ಅವಕಾಶವನ್ನು ಸರ್ಕಾರಿ ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಅಧೀನದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿಸಿದ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗೊಳಪಟ್ಟು ನಿಯತಗೊಳಿಸಲು ಅವಕಾಶವನ್ನು ಕಲ್ಪಿಸಲು ತೀರ್ಮಾನಿಸಿದೆ. ಅದರಂತೆ ಈ ಆದೇಶ.

### ಸರ್ಕಾರಿ ಆದೇಶ ಸಂಖ್ಯೆ: ಆಇ 03 ಸೇನಿಸೇ 2024 ಬೆಂಗಳೂರು, ದಿನಾಂಕ: 17.1.2025

2025 ನೇ ಸಾಲಿನ ಬ್ಲಾಕ್ ಅವಧಿಗೆ ಎಲ್ಲಾ ವೃಂದದ ರಾಜ್ಯ ಸರ್ಕಾರಿ ಅಧಿಕಾರಿ/ನೌಕರರಿಗೆ ಹಾಗೂ ಸರ್ಕಾರದಿಂದ ಸಹಾಯಾನುದಾನ/ಅನುದಾನ ಪಡೆಯುವ ಅಥವಾ ಪಡೆಯದಿರುವ ಕರ್ನಾಟಕ ಸರ್ಕಾರದ ಎಲ್ಲಾ ಸಂಸ್ಥೆಗಳ/ಉದ್ಯಮಗಳ ನೌಕರರಿಗೂ ಸಂಬಂಧಿತ ಸಂಸ್ಥೆ/ಉದ್ಯಮಗಳ ಆರ್ಥಿಕ ಸ್ಥಿತಿಗತಿಗಳಿಗೊಳಪಟ್ಟು ಗರಿಷ್ಠ 15 ದಿನಗಳಿಗೆ ಮೀರದಂತೆ ಗಳಿಕೆ ರಜೆಯನ್ನು ಅಧ್ಯರ್ಪಿಸಿ ರಜಾ ವೇತನಕ್ಕೆ ಸಮನಾದ ನಗದೀಕರಣ ಸೌಲಭ್ಯವನ್ನು ಜಾರಿಗೊಳಿಸಿ ಆದೇಶಿಸಿದೆ.

ಈ ಸೌಲಭ್ಯವು ದಿನಾಂಕ:1/1/2025 ರಿಂದ 31/12/2025 ರ ವರೆಗೆ ಜಾರಿಯಲ್ಲಿರುತ್ತದೆ. ಈ ಸೌಲಭ್ಯವನ್ನು ಎಲ್ಲಾ ವೃಂದದ ಅರ್ಹ ಸರ್ಕಾರಿ ಅಧಿಕಾರಿ/ನೌಕರರು ಒಂದು ತಿಂಗಳ ಮುಂಚಿತವಾಗಿ ಮನವಿ ನೀಡಿ ಅವರ ಇಚ್ಛೆಯ ಯಾವುದೇ ತಿಂಗಳಿನಲ್ಲಿ ಗಳಿಕೆ ರಜೆ ನಗದೀಕರಣ ಸೌಲಭ್ಯ ಪಡೆಯಬಹುದಾಗಿದೆ.

ಗೆಜೆಟೆಡ್ ಅಧಿಕಾರಿಗಳ ಸಂಬಂಧದಲ್ಲಿ 2025 ನೇ ಸಾಲಿನ ಗಳಿಕೆ ರಜೆ ನಗದೀಕರಣ ಸೌಲಭ್ಯ ಮಂಜೂರಾತಿ ಉದ್ದೇಶಕ್ಕಾಗಿ ಮಾತ್ರ ಹೆಚ್‌ಆರ್‌ಎಂಎಸ್‌ನಲ್ಲಿ ಲಭ್ಯವಿರುವಂತೆ ಅಧಿಕಾರಿಗಳ ಗಳಿಕೆ ರಜೆ